22.03.2022 119

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ ಬುಡ್ನ ಸಿದ್ದಿ ರವರ ನಿಯಮ 72ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:-** ಅರಣ್ಯ ಹಕ್ಕು ಕಾಯ್ದೆಯ 2006ರ ಸೆಕ್ಷನ್ 3 (ಎ) ಅನ್ವಯ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬುಡಕಟ್ಟು ಜನಾಂಗಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ.

**ಉತ್ತರ:-**

ಅನುಸೂಚಿತ ಬುಡಕಟ್ಟು ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳು (ಅರಣ್ಯ ಹಕ್ಕುಗಳನ್ನು ಮಾನ್ಯ ಮಾಡುವ) ಅಧಿನಿಯಮ, 2006 ರ ಸೆಕ್ಷನ್ 3(1)ರಲ್ಲಿ ಅರಣ್ಯ ಪ್ರದೇಶ ವ್ಯಾಪ್ತಿಯಲ್ಲಿ ಅರಣ್ಯ ವಾಸಿ ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳು ಹಕ್ಕುಗಳ ಬಗ್ಗೆ ವಿವರಿಸಲಾಗಿರುತ್ತದೆ.

ಮುಂದುವರೆದು, ಅರಣ್ಯ ಹಕ್ಕು ಕಾಯ್ದೆಯ 2006ರ ಸೆಕ್ಷನ್ 3(2)ರಲ್ಲಿ ಅರಣ್ಯ (ಸಂರಕ್ಷಣಾ) ಕಾಯ್ದೆ 1980ರಲ್ಲಿ ಏನೇ ಒಳಗೊಂಡಿದ್ದರೂ, ಕೇಂದ್ರ ಸರ್ಕಾರವು ನಿರ್ವಹಿಸುವ ವಿವಿಧ ಮೂಲಭೂತ ಸೌಲಭ್ಯಗಳಿಗಾಗಿ ಪ್ರತಿ ಹೆಕ್ಟೇರ್‌ಗೆ ಎಪ್ಪತ್ತೈದು ಮರಗಳನ್ನು ಮೀರದಂತೆ ಕಡಿಯುವುದಕ್ಕೆ ಅವಕಾಶವಿರುವ ಅರಣ್ಯ ಜಮೀನನ್ನು ಬಿಟ್ಟುಕೊಡಲು ಅವಕಾಶ ಕಲ್ಪಿಸಲಾಗಿದೆ.

ಆದರೆ, ಅನುಸೂಚಿತ ಬುಡಕಟ್ಟು ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳು (ಅರಣ್ಯ ಹಕ್ಕುಗಳನ್ನು ಮಾನ್ಯ ಮಾಡುವ) ಅಧಿನಿಯಮ, 2006ರ ಸೆಕ್ಷನ್ 3 (2)ರ ಕುರಿತಂತೆ ***"ಆದಾಗ್ಯೂ, ಈ ಕಾಯ್ದೆಯ ಸೆಕ್ಷನ್ 3(2) ಏನನ್ನೇ ಒಳಗೊಂಡಿದ್ದರೂ ಸಹ, ಅರಣ್ಯ (ಸಂರಕ್ಷಣೆ) ಕಾಯ್ದೆ, 1980ರಲ್ಲಿ ಕೆಲವು ಸೌಲಭ್ಯಗಳನ್ನು ಮಾತ್ರ ಒದಗಿಸುತ್ತದೆ. ಅದೇ ಸಮಯದಲ್ಲಿ, ಈ ಕಾಯ್ದೆಯ ಸೆಕ್ಷನ್ 13ರಲ್ಲಿ ಸದ್ಯಕ್ಕೆ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ನಿಬಂಧನೆಗಳನ್ನು ಕುಂಠಿತಗೊಳಿಸತಕ್ಕದ್ದಲ್ಲ"*** ಎಂದು ಕೇಂದ್ರ ಸರ್ಕಾರದ ಪತ್ರ ದಿನಾಂಕ 18-10-2020ರಲ್ಲಿ ತಿಳಿಸಲಾಗಿದೆ. ಈ ಹಿನ್ನಲೆಯಲ್ಲಿ, ಈ ಕಾಯ್ದೆ ಸೆಕ್ಷನ್ 3(2) ವನ್ಯಜೀವಿ (ಸಂರಕ್ಷಣೆ) ಕಾಯ್ದೆಯ ನಿಬಂಧನೆಗಳ ಮೇಲೆ ಪರಿಣಾಮ ಬೀರುವುದಿಲ್ಲ. ಆದ್ದರಿಂದ, ಈ ಕಾಯ್ದೆಯ ಸೆಕ್ಷನ್ 13ರ ಪ್ರಕಾರ ಈ ಕಾಯ್ದೆಯ ಸೆಕ್ಷನ್ 3(2) ಅನುಷ್ಠಾನಕ್ಕೆ ವನ್ಯಜೀವಿ ವಿಮೋಚನೆ ಪಡೆಯುವುದು ಅಗತ್ಯವಿರುತ್ತದೆ.

ಒಂದು ವೇಳೆ ಅರಣ್ಯ ಪ್ರದೇಶದಲ್ಲಿ ಬುಡಕಟ್ಟು ಜನಾಂಗಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಅರಣ್ಯ (ಸಂರಕ್ಷಣೆ) ಕಾಯ್ದೆ 1980ರಡಿಯಲ್ಲಿ ಕೇಂದ್ರ ಸರ್ಕಾರದ ಪತ್ರ ಸಂಖ್ಯೆ F.No. 5-2/2017-FC ದಿನಾಂಕ 28.03.2019ರಲ್ಲಿ ಜಾರಿಗೊಳಿಸಿದ ಎಫ್‌ಸಿ ಮಾರ್ಗಸೂಚಿಯ ಅಧ್ಯಾಯ-4ರ ಪ್ಯಾರ 4.1ರಿಂದ 4.3.1ರಂತೆ ಒಂದು ಹೆಕ್ಟೇರ್ ವಿಸ್ತೀರ್ಣದವರೆಗಿನ ಹಾಗೂ ಹೆಕ್ಟೇರ್ ಗೆ 50 ಮರಗಳಿಗಿಂತ ಕಡಿಮೆ ಮರಗಳನ್ನು ಕಡಿಯುವ ಪ್ರಸ್ತಾವನೆಗಳಲ್ಲಿ ಕೇಂದ್ರ ಸರ್ಕಾರವು ಕೆಲವು ನಿರ್ದಿಷ್ಟ ಮೂಲಭೂತ ಅವಶ್ಯಕವಾದ ರಸ್ತೆ, ಕುಡಿಯುವ ನೀರು, ವಿದ್ಯುತ್ ಕಾಮಗಾರಿಗಳಿಗೆ ಈಗಾಗಲೇ ಸಾಮಾನ್ಯ ಅನುಮೋದನೆ (General Approval) ಯನ್ನು ನೀಡಲು ರಾಜ್ಯ ಸರ್ಕಾರಕ್ಕೆ ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.

ಆದುದರಿಂದ, ಕೇಂದ್ರ ಸರ್ಕಾರದಿಂದ ವನ್ಯಜೀವಿ ವಿಮೋಚನೆ ಪಡೆದು ರಾಷ್ಟ್ರೀಯ ಉದ್ಯಾನವನಗಳ ವ್ಯಾಪ್ತಿಯಲ್ಲಿರುವ ಬುಡಕಟ್ಟು ಜನಾಂಗಗಳಿಗೆ ಅರಣ್ಯ ಹಕ್ಕು ಕಾಯ್ದೆಯ 2006ರ ಸೆಕ್ಷನ್ 3(ಎ) ಅನ್ವಯ ನಿಯಮಾನುಸಾರ ಮೂಲಭೂತ ಸೌಕರ್ಯ ಕಲ್ಪಿಸಬಹುದಾಗಿರುತ್ತದೆ.

ಅಲ್ಲದೇ, ಅರಣ್ಯ (ಸಂರಕ್ಷಣೆ) ಕಾಯ್ದೆ, 1980ರಡಿಯಲ್ಲಿ ಅರಣ್ಯ ಪ್ರದೇಶವನ್ನು ರಸ್ತೆ ನಿರ್ಮಾಣ/ಅಗಲೀಕರಣ, ಶಾಲೆ ನಿರ್ಮಾಣ, ಆಸ್ಪತ್ರೆಗಳು, ವಿದ್ಯುತ್ ಪ್ರಸರಣ ಮಾರ್ಗ, ಕುಡಿಯುವ ನೀರು ಮುಂತಾದ ಕೆಲವು ಮೂಲಭೂತ ಸೌಕರ್ಯಗಳಿಗೆ ಅರಣ್ಯೇತರ ಉದ್ದೇಶಕ್ಕಾಗಿ ಉಪಯೋಗಿಸಲು ಸಂಬಂಧಿತ ಉಪಯೋಗಿ ಸಂಸ್ಥೆಗಳಿಂದ ಕೇಂದ್ರ ಸರ್ಕಾರದ ಮಾರ್ಗಸೂಚಿಗಳಂತೆ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿ ಅರ್ಹ ಪ್ರಕರಣಗಳಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯನ್ನು ಪಡೆಯಲಾಗುತ್ತಿದೆ.

**ಸಂಖ್ಯೆ: FEE 37 FLL 2022(e)**

(ಉಮೇಶ ವಿ. ಕತ್ತಿ)
ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು.